# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

---

## ವಾರ್ಡ್ ನಂ.70 : ರಾಜಗೋಪಾಲ ನಗರ

---

**ದಿನಾಂಕ: 30.11.2021 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ-ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು-ವಾರ್ಡ್ 70 |
| 3 | ಕೆ. ಪ್ರಭುದಾಸ್ | ಕಂದಾಯ ವಸೂಲಿಗಾರರು |
| 4 | ನಾಗೇಶ್ | ಘನ ತ್ಯಾಜ್ಯ ನಿರ್ವಹಣೆ ಗುತ್ತಿಗೆದಾರರು |
| 5 | ಹರೀಶ್ | ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರು |

**:ನಡಾವಳಿಯ ವರದಿ:**

➤ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

**ವಿಷಯ ಸಂಖ್ಯೆ: 1:- ಇತ್ತೀಚೆಗೆ ಸುರಿದ ಭಾರೀ ಮಳೆಯಿಂದಾಗೀ ಹಾನಿಯಾಗಿರುವ ರಸ್ತೆ & ಚರಂಡಿಗಳನ್ನು ದುರಸ್ತಿ ಪಡಿಸುವ ಬಗ್ಗೆ**

ಇತ್ತೀಚೆಗೆ ಸುರಿದ ಭಾರೀ ಮಳೆಯಿಂದಾಗೀ ಹಾನಿಯಾಗಿರುವ ರಸ್ತೆ & ಚರಂಡಿಗಳನ್ನು ದುರಸ್ತಿ ಪಡಿಸಲು ಕೈಗೊಳ್ಳಬೇಕಾಗಿರುವ ಕಾಮಗಾರಿಗಳ ಬಗ್ಗೆ ಚರ್ಚಿಸಲಾಯಿತು ಹಾಗೂ ಈ ಕೆಳಕಂಡ ಕಾಮಗಾರಿಗಳಿಗೆ ಅನುದಾನ ನಿರೀಕ್ಷಿಸಿ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲು ತೀರ್ಮಾನಿಸಲಾಯಿತು.

| Sl. No. | Name of Work | Estimated Cost (Rs. in Lakhs) |
|---|---|---|
| 1 | Construction of Culvert to SWD and Improvements of road and drains in Basappanakatte in Ward No.70 | 99.00 |
| 2 | Improvements to roads and drains at Main & Cross roads surrounding Konika Garments in Ward No.70 | 98.00 |

| | | |
|---|---|---|
| 3 | Improvements to roads and drains at 1st Cross to 5th cross in Srigandha Nagara in Ward No.70 | 97.00 |
| 4 | Improvements to roads and drains at 5th Cross to 10th cross in Srigandha Nagara in Ward No.70 | 99.00 |
| 5 | Improvements to roads and drains at Main & Cross roads of ASB Layout in Ward No.70 | 99.00 |
| 6 | Improvements to roads and drains at 15th Cross and Anuradha College Surrounding cross roads in Srigandha Nagara in Ward No.70 | 99.00 |
| 7 | Improvements to roads and drains at 1st Cross to 5th Cross & its connecting cross roads Cross roads of Kasthuri Badavane in Ward No.70 | 98.00 |
| 8 | Improvements to roads and drains at 6th Cross to 9th Cross & its surrounding cross roads in Kasthuri Badavane in Ward No.70 | 97.00 |
| 9 | Improvements to roads and drains at 3rd to 10th Cross & its surrounding cross roads in Shambhavi nagara in Ward No.70 | 89.00 |
| | **Total Amount** | **875.00** |

- **ವಿಷಯ ಸಂಖ್ಯೆ:2**

**ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ನೋಟೀಸ್ ಜಾರಿ ಮಾಡುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್‌ನ ಹಲವು ಕಡೆಗಳಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ರಸ್ತೆ ಅಗೆದಿದ್ದು Restoration ಮಾಡಿರುವುದಿಲ್ಲ ಎಂಬುದಾಗೀ ದೂರುಗಳು ಬಂದಿದ್ದು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ನೋಟೀಸ್ ಜಾರಿ ಮಾಡುವಂತೆ ಸಹಾಯಕ ಅಭಿಯಂತರರಿಗೆ ತಿಳಿಸಿದರು.

ವಾರ್ಡ್ 70ರ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರಿಗೆ ಕತ್ತರಿಸಿರುವ ರಸ್ತೆಗಳನ್ನು Restoration ಮಾಡುವಂತೆ ನೋಟೀಸ್ ಜಾರಿ ಮಾಡಲಾಗಿದೆ ಎಂದು ತಿಳಿಸಿದರು.

- **ವಿಷಯ ಸಂಖ್ಯೆ:3 :- ವಾರ್ಡ್ 70ರಲ್ಲಿ ತೆರೆದಿದ್ದ ಟ್ರಯಾಜ್ ಸೆಂಟರ್ ಬಿಲ್ ಪಾವತಿಸುವ ಬಗ್ಗೆ**

ಸಭೆಯಲ್ಲಿ ಹಾಜರಿದ್ದ ಶ್ರೀ ನಾಗೇಶ್ ರವರು ನೋಡಲ್ ಅಧಿಕಾರಿರವರಿಗೆ ಪತ್ರವನ್ನು ನೀಡಿ "ವಾರ್ಡ್ 70ರ ವ್ಯಾಪ್ತಿಯಲ್ಲಿ ಸರ್ಕಾರಿ ಪ್ರೌಢಶಾಲೆ, ಹೆಗ್ಗನಹಳ್ಳಿ ಇಲ್ಲಿ ತೆರೆದಿರುವ ಟ್ರಯಾಜ್ ಸೆಂಟರ್ ದಿನಾಂಕ:19/05/2021 ರಿಂದ ಇಲ್ಲಿಯವರೆಗೆ ಕಾರ್ಯ ನಿರ್ವಹಿಸುತ್ತಿದ್ದು, ಸದರಿ ಕೇಂದ್ರಕ್ಕೆ 8 ಟೇಬಲ್‌ಗಳು, 20 ಕುರ್ಚಿಗಳು, ಪ್ರತಿನಿತ್ಯವು ಹಾಸಿಗೆಯ ಹೊದಿಕೆಗಳು, ಶುದ್ಧೀಕರಿಸಿದ ನೀರು, ಲೋಟಗಳು ಹಾಗೂ ಸ್ವಚ್ಛತಾ ಸಾಮಗ್ರಿಗಳನ್ನು ಪೂರೈಕೆ ಮಾಡಿದ್ದು, ಇದಕ್ಕೆ ಸಂಬಂಧಿಸಿದ ಬಿಲ್ಲನ್ನು ಪಾವತಿಸಿರುವುದಿಲ್ಲ. ಈ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಕೋರಿದರು.

ನೋಡಲ್ ಅಧಿಕಾರಿರವರು, ಮಾತನಾಡಿ ಹಾಜರಿದ್ದ ಸಹಾಯಕ ಅಭಿಯಂತರರುರವರಿಗೆ ಈ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳಿಂದ ವರದಿ ಪಡೆದು ಅಂದಾಜು ಪಟ್ಟಿ ತಯಾರಿಸಿ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ 70, ರಾಜಗೋಪಾಲ ನಗರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ.70, ರಾಜಗೋಪಾಲ ನಗರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು:
1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ